52

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ಅಧಿವೇಶನದಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.**

**ಪ್ರಸ್ತಾಪಿತ ವಿಷಯ:**

ಬ್ಯಾಟರಿ ಚಾಲಿತ ಆಟೋರಿಕ್ಷಾಗಳಿಗೆ ಪರವಾನಿಗೆ / ಪರ್ಮಿಟ್ ಇಲ್ಲದೇ ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕಿಗೂ ಸಂಚರಿಸಬಹುದೆಂದು ರಾಜ್ಯ ಸರ್ಕಾರ ಹೊರಡಿಸಿದ ಸೂಚನೆಯಿಂದ ರಹದಾರಿ ಪಡೆದು ಅದರ ಪರಿಮಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಲಕ್ಷಾಂತರ ಆಟೋರಿಕ್ಷಾ ಚಾಲಕರಿಗೆ ಉಂಟಾಗಿರುವ ಆರ್ಥಿಕ ಹಾಗೂ ಪಾರ್ಕಿಂಗ್ ತೊಂದರೆಗಳ ವಿಚಾರ ಕುರಿತು.

**ಉತ್ತರ:**

ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: S.O 5333 (E), ದಿನಾಂಕ:18-10-2018ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66(3)(ಎನ್)ರಲ್ಲಿ ಪ್ರದತ್ತವಾದ ಅಧಿಕಾರದಡಿ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಸಂಚರಿಸುವ ಸಾರಿಗೆ ವಾಹನಗಳು ಹಾಗೂ ಬ್ಯಾಟರಿ ಆಧಾರಿತ ವಾಹನಗಳಿಗೆ ಸದರಿ ಕಾಯ್ದೆ ಕಲಂ 66(1) ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ ಹಾಗೂ ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: GSR 525 (E), ದಿನಾಂಕ:02.08.2021 ರಲ್ಲಿ ಬ್ಯಾಟರಿ ಆಧಾರಿತ ವಾಹನಗಳಿಗೆ ಕೇಂದ್ರ ಮೋಟಾರು ವಾಹನಗಳ ನಿಯಮಗಳು 1989ರ, ನಿಯಮ 81ರಲ್ಲಿ ನಿಗಧಿಪಡಿಸಿರುವ ನೋಂದಣಿ ಶುಲ್ಕದಿಂದ ವಿನಾಯತಿ ನೀಡಿ ಆದೇಶ ಹೊರಡಿಸಲಾಗಿರುತ್ತದೆ.

ಮುಂದುವರೆದು, ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 2 ಟಿಡಿಓ 2019, ದಿನಾಂಕ:20.01.2022 ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66(3)(ಎನ್) ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸದರಿ ಕಾಯ್ದೆ ಕಲಂ 66(1) ರಡಿ ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಅಧ್ಯಕ್ಷರು, ದಕ್ಷಿಣ ಕನ್ನಡ ಜಿಲ್ಲಾ ಆಟೋರಿಕ್ಷಾ ಚಾಲಕ ಮಾಲೀಕರ ಸಂಘಗಳ ಒಕ್ಕೂಟ, ಮಂಗಳೂರು ಅವರ ಮನವಿ ಪತ್ರ ದಿನಾಂಕ:22.02.2024ರಲ್ಲಿ ನೆರೆಯ ರಾಜ್ಯದಲ್ಲಿ ಬ್ಯಾಟರಿ ಚಾಲಿತ ಸಾರಿಗೆ ವಾಹನಗಳಿಗೆ ಶುಲ್ಕ ರಹಿತ ರಹದಾರಿಯನ್ನು ಕಡ್ಡಾಯಗೊಳಿಸಿದ ರೀತಿಯಲ್ಲಿ ಕರ್ನಾಟಕ ರಾಜ್ಯದಲ್ಲಿನ ಬ್ಯಾಟರಿ ಚಾಲಿತ ಆಟೋರಿಕ್ಷಾಗಳಿಗೆ ಪರವಾನಿಗೆಯನ್ನು ಕಡ್ಡಾಯಗೊಳಿಸಲು ಕೋರಿರುತ್ತಾರೆ.

ರಾಜ್ಯ ಸರ್ಕಾರದ ಅಧಿಸೂಚನೆಯಿಂದ ಬ್ಯಾಟರಿ ಚಾಲಿತ ವಾಹನಗಳು, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಸಂಚರಿಸುವ ಸಾರಿಗೆ ವಾಹನಗಳ ನಿಯಂತ್ರಣ ಹಾಗೂ ವಾಹನಗಳ ಮೇಲೆ ನಿಗಾವಹಿಸಲು ತೊಂದರೆಯಾಗುತ್ತಿದ್ದು, ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅದರ ವಿರುದ್ಧ ಮೋಟಾರು ವಾಹನಗಳ ಕಾಯ್ದೆ ಮತ್ತು ಅದರಡಿ ರಚಿತವಾದ ನಿಯಮಗಳನ್ವಯ ಕ್ರಮ ಕೈಗೊಳ್ಳಲು ಕಷ್ಟಸಾಧ್ಯವಾಗುವುದಲ್ಲದೆ, ಇತರೆ ಇಂಧನದಿಂದ ಸಂಚರಿಸುವ ವಾಹನಗಳ ಮಾಲೀಕರು/ ಚಾಲಕರುಗಳ ನಡುವೆ ತಾರತಮ್ಯತೆ ಉಂಟಾಗುವುದರಿಂದ ಅನಿರೀಕ್ಷಿತ ಅನಾರೋಗ್ಯಕರ ಸ್ಪರ್ಧೆ ಉಂಟಾಗುವ ಸಾಧ್ಯತೆಗಳು ಹೆಚ್ಚಾಗುವುದು ಸಹ ಕಂಡುಬಂದಿರುತ್ತದೆ.

ಈ ಮೇಲ್ಕಂಡ ಅಂಶಗಳಿಂದ, ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 2 ಟಿಡಿಓ 2019, ದಿನಾಂಕ:20.01.2022 ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66(3)(ಎನ್) ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸದರಿ ಕಾಯ್ದೆ ಕಲಂ 66(1) ರಡಿ ರಹದಾರಿ ವಿನಾಯತಿ ನೀಡಿರುವ ಆದೇಶವನ್ನು ಹಿಂಪಡೆದು ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66(3)(ಎನ್) ಮತ್ತು ಕಲಂ 96 (xxxiii) ರಲ್ಲಿ ಪ್ರದತ್ತವಾದ ಅಧಿಕಾರದಡಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸಂಬಂಧಪಟ್ಟ ರಹದಾರಿಯನ್ನು ಶುಲ್ಕ ರಹಿತವಾಗಿ ಮಂಜೂರು ಮಾಡುವ ಕುರಿತಂತೆ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಟಿಡಿ 58 ಟಿಡಿಕ್ಯೂ 2024**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.